# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 1665(1821) |
| **ಮಾನ್ಯ ಸದಸ್ಯರ ಹೆಸರು** | ಶ್ರೀ ಕೆ.ವಿವೇಕಾನಂದ (ಶಿಕ್ಷಕರ ಕ್ಷೇತ್ರ) |
| **ಉತ್ತರಿಸುವ ಸಚಿವರು** | ಉನ್ನತ ಶಿಕ್ಷಣ ಸಚಿವರು |
| **ಉತ್ತರಿಸಬೇಕಾದ ದಿನಾಂಕ** | 23.03.2026 |

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ನೌಕರರ ಖಾಯಂ ಪೂರ್ವ ಸೇವಾ ಅವಧಿಯನ್ನು ಪೂರ್ಣಗೊಳಿಸಲು ಎಷ್ಟು ವರ್ಷ ಸೇವಾ ಅವಧಿಯನ್ನು ಪೂರೈಸಿರಬೇಕು; (ರಾಜ್ಯದ ಎಲ್ಲಾ ವಿಶ್ವವಿದ್ಯಾಲಯದ ಪೂರ್ಣ ಮಾಹಿತಿ ನೀಡುವುದು) | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 19 ಸೇಇವಿ 2021 ದಿನಾಂಕ: 28.6.2021ರ ರಾಜ್ಯ ಸರ್ಕಾರವು ಸ್ಥಾಪಿಸಿರುವ ನಿಗಮ, ಮಂಡಳಿ, ಕಂಪನಿ, ಸ್ಥಳೀಯ ಸಂಸ್ಥೆ, ವಿಶ್ವವಿದ್ಯಾಲಯ ಇತ್ಯಾದಿ ಸ್ವಾಯತ್ತ ಸಂಸ್ಥೆಗಳು ಅವುಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತುಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ನಿಯಮ/ವಿನಿಯಮಗಳನ್ನು ರಚಿಸಿಕೊಳ್ಳುವಂತೆ ತಿಳಿಸಲಾಗಿರುತ್ತದೆ. ಅದರನ್ವಯ ಸಾರ್ವಜನಿಕ ವಿಶ್ವವಿದ್ಯಾಲಯಗಳು ಪ್ರತ್ಯೇಕ ಪರಿನಿಯಮಗಳನ್ನು ರಚಿಸಿಕೊಳ್ಳಬೇಕಾಗಿರುತ್ತದೆ.<br><br>ಅದರಂತೆ, ಕರ್ನಾಟಕ ಸಿವಿಲ್ ಸೇವೆಗಳು (ಪ್ರೊಬೆಷನ್) ನಿಯಮಗಳು) 1977ರ ನಿಯಮ (3)ರನ್ವಯ ಸರ್ಕಾರಿ ನೌಕರರ ಪ್ರೊಬೇಷನರ್ ಅವಧಿಯು 02 ವರ್ಷಗಳಿಗಿಂತ ಕಡಿಮೆ ಇರತಕ್ಕದ್ದಲ್ಲ ಎಂಬುದಾಗಿರುತ್ತದೆ. ಈ ನಿಯಮಗಳನ್ವಯ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳು ಪರಿನಿಯಮಗಳನ್ನು ರಚಿಸಿಕೊಂಡು ತನ್ನ ಖಾಯಂ ನೌಕರರ ಖಾಯಂ ಪೂರ್ವ ಸೇವಾ ಅವಧಿಯನ್ನು 02 ವರ್ಷಕ್ಕೆ ನಿಗದಿಪಡಿಸಿಕೊಳ್ಳಬೇಕಾಗಿರುತ್ತದೆ.<br><br>ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವನ್ನು ಹೊರತುಪಡಿಸಿ ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಇನ್ನಿತರೆ ಸಾರ್ವಜನಿಕ ವಿಶ್ವವಿದ್ಯಾಲಯಗಳು ತನ್ನ ಖಾಯಂ ನೌಕರರ ಖಾಯಂಪೂರ್ವ ಸೇವಾ ಅವಧಿಯನ್ನು 02 ವರ್ಷಕ್ಕೆ ನಿಗದಿಪಡಿಸಿಕೊಂಡಿರುತ್ತವೆ. |
| ಆ) | ಸರ್ಕಾರದ ಅಧೀನದಲ್ಲಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಖಾಯಂ ಪೂರ್ವ ಸೇವಾ ಅವಧಿಯನ್ನು ಪೂರ್ಣಗೊಳಿಸಲು ಇಂತಿಷ್ಟು ವರ್ಷ ಸೇವೆ ಸಲ್ಲಿಸಿರಬೇಕು ಎಂಬ ನಿಯಮ ಇದೆಯೇ; (ವಿವರ ನೀಡುವುದು) | |
| ಇ) | ಮೈಸೂರಿನ ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರಿಗೆ ಹೋಲಿಕೆ ಮಾಡಿದರೆ ಬೇರೆ ವಿಶ್ವವಿದ್ಯಾಲಯಗಳಲ್ಲಿ ಕಡಿಮೆ ಇರುವುದಾಗಿ ತಿಳಿದು ಬಂದಿದ್ದು, ಸದರಿ ವಿಶ್ವವಿದ್ಯಾಲಯದ ಖಾಯಂ ನೌಕರರ ಸೇವಾ ಅವಧಿಯನ್ನು ಕಡಿಮೆ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ? | ಕರ್ನಾಟಕ ಸಿವಿಲ್ ಸೇವೆಗಳು (ಪ್ರೊಬೆಷನ್) ನಿಯಮಗಳು) 1977ರ ನಿಯಮ (3)ರನ್ವಯ ಸರ್ಕಾರಿ ನೌಕರರ ಪ್ರೊಬೇಷನರ್ ಅವಧಿಯು 02 ವರ್ಷಗಳಿಗಿಂತ ಕಡಿಮೆ ಇರತಕ್ಕದ್ದಲ್ಲ ಎಂಬುದಾಗಿರುತ್ತದೆ. ಈ ನಿಯಮಗಳ ನಿಯಮ 4ರಲ್ಲಿ ಪ್ರೊಬೇಷನ್ ಅವಧಿಯನ್ನು ವಿಸ್ತರಿಸುವುದು ಅಥವಾ ಕಡಿತಗೊಳಿಸುವುದು:-4(1) (ii) ಯಾವುದೇ ಇತರ ನೇಮಕ ಪ್ರಾಧಿಕಾರವು ನಿರ್ದಿಷ್ಟ ಪಡಿಸಿದ ಪ್ರೊಬೇಷನ್ |

| | | |
|---|---|---|
| | | ಅವಧಿಯು ಅರ್ಧಕ್ಕಿಂತ ಹೆಚ್ಚಾಗದಷ್ಟು ಅವಧಿಯವರೆಗೆ ಎಂಬುದಾಗಿರುತ್ತದೆ.<br>ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 307 ಎಸ್‌ಆರ್‌ಆರ್ 2018, ದಿನಾಂಕ: 01.07.2019ರಲ್ಲಿ "ಕರ್ನಾಟಕ ಸಿವಿಲ್ ಸೇವೆಗಳು (ಪ್ರೊಬೆಷನ್) ನಿಯಮಗಳು) 1977ರ ನಿಯಮ 4(1)(ii)ಕ್ಕೆ ನಿಗದಿತ ಪ್ರೊಬೇಷನ್ ಅವಧಿಯ ಅರ್ಧದಷ್ಟು ಎಂಬ ಪದಗಳ ಬದಲಿಗೆ 05 ವರ್ಷಗಳು ಎಂಬುದಾಗಿ ತಿದ್ದುಪಡಿ ಮಾಡಲಾಗಿರುತ್ತದೆ."<br>ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ದಿನಾಂಕ: 01.07.2019ರ ನಂತರ ನೇಮಕವಾದ ಹಾಗೂ ನಂತರ ನೇಮಕವಾಗುವ ಖಾಯಂ ಬೋಧಕೇತರ ಸಿಬ್ಬಂದಿಗೆ ಖಾಯಂ ಪೂರ್ವ ಸೇವಾ ಅವಧಿಯನ್ನು 02 ವರ್ಷಕ್ಕೆ ಮರು ನಿಗದಿಪಡಿಸುವ ಕುರಿತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಿಂದ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. |

**ಸಂಖ್ಯೆ**: ಇಡಿ 11 ಯುಓವಿ 2026

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು